**ಪ್ರಧಾನ ಸಿವಿಲ್ ನ್ಯಾಯಾಧೀಶರು ಮತ್ತು ಜೆ.ಎಂ.ಎಫ್.ಸಿ., ಬಂಗಾರಪೇಟೆ**

**ಸಿಸಿ ಸಂಖ್ಯೆ: 2543/2022**

**ಚಾಸಾಃ 15 ಪ್ರಾಸಾಃ 3**

**ಸಾಕ್ಷಿಯನ್ನು ದಿಃ 04-06-2026 ರಂದು ಕರೆಸಿ ಪ್ರಮಾಣ ವಚನ ಬೋಧಿಸಲಾಯಿತು.**

| | |
|---|---|
| ಹೆಸರುಃ | ಸಂಜೀವರಾಯಪ್ಪ ಟಿ |
| ತಂದೆ ಹೆಸರುಃ | ತಿಪ್ಪಯ್ಯ |
| ವಯಸ್ಸುಃ | 48 |
| ವೃತ್ತಿಃ | ಪಿಐ |
| ವಾಸ ಸ್ಥಳಃ | ಬೆಂಗಳೂರು |

**ಮುಖ್ಯ ವಿಚಾರಣೆಃ ಸಹಾಯಕ ಸರ್ಕಾರಿ ಅಭಿಯೋಜಕರಿಂದಃ**

ನಾನು 2022 – 2023 ನೇ ಸಾಲಿನಲ್ಲಿ ಬಂಗಾರಪೇಟೆ ಪೊಲೀಸ್ ಠಾಣೆಯಲ್ಲಿ ಪಿಐ ಆಗಿ ಕರ್ತವ್ಯ ನಿರ್ವಹಿಸಿರುತ್ತೇನೆ.

.ದಿನಾಂಕಃ 17.09.2022 ರಂದು ಪ್ರಸ್ತುತ ಕಡತವನ್ನು ಚಾಸಾ-14 ರವರಿಂದ ಪಡೆದು ಮುಂದುವರೆಸಿರುತ್ತೇನೆ. ಅದೇ ದಿನ 08-30 ಗಂಟೆಗೆ ಎಸ್ ಎನ್ ಆರ್ ಆಸ್ಪತ್ರೆಯ ಶವಗಾರಕ್ಕೆ ಭೇಟಿ ನೀಡಿ ಪಂಚರಾದ ಚಾಸಾ-5 ರಿಂದ 7 ರವರ ಸಮಕ್ಷಮ ಶವ ತನಿಖಾ ಪಂಚನಾಮೆಯನ್ನು ಜರುಗಿಸಿರುತ್ತೇನೆ. ನಂತರ ಚಾಸಾ-8 ಮತುತ 9 ಹಾಗೂ ಇತರೆ ಸಾಕ್ಷಿದಾರರ ಹೇಳಿಕೆಗಳನ್ನು ಪಡೆದುಕೊಂಡಿರುತ್ತೇನೆ. ಅದೇ ದಿನ ಬೆಳಗ್ಗೆ 11-30 ಗಂಟೆಗೆ ಪಿಎಂ ಜರುಗಿಸಲು ವೈದ್ಯಾಧಿಕಾರಿಗಳಿಗೆ ಪತ್ರ ಬರೆದಿರುತ್ತೇನೆ. ನಂತರ ಶವವನ್ನು ಸಂಬಂಧಿಕರಿಗೆ ಹಸ್ತಾಂತರಿಸಿ ಅದಕ್ಕೆ ಸಂಬಂಧಪಟ್ಟಂತೆ ಸ್ವೀಕೃತಿ ಪಡೆದುಕೊಂಡಿರತ್ತೇನೆ. ಅದೇ ದಿನ 11-40 ದ್ಕೆ ಕೃತ್ಯ ನಡೆದ ಸ್ಥಳಕ್ಕೆ ಭೇಟಿ ನೀಡಿ ಚಾಸಾ1 9 ಶಶಿ10 ರವರ ಸಮಕ್ಷಮ ಘಟನ ಸ್ಥಳದ ಪಂಚನಾಮೆ ಜರುಗಿಸಿರುತ್ತೇನೆ. ಸ್ಥಳದಲ್ಲಿ ಕಚ್ಚಾ ನಕಾಶೆ ತಯಾರಿಸಿ ಭಾವಚಿತ್ರ ಪಡೆದುಕೊಂಡಿರುತ್ತೇನೆ

ದಿಃ 19-09-2022 ರಂದು ಐಎಂವಿ ತಪಾಸಣೆಗಗಾಗಿ ಸೂಕ್ತ ಆರ್ಟಿಓ ರವರೆಗ ಪತ್ರ ಬರೆದಿರುತ್ತೇನೆ. ಅದೇ ದಿನದಂದು ಪಿಎಂ ವರದಿ ಪಡೆದುಕೊಂಡು ಕಡತಕ್ಕೆ ಅಳವಡಿಸಿಕೊಂಡಿರುತ್ತೇನೆ. ಅದೇ ದಿನ ವಾಹನದ ಮೂಲೀಕರಾದ ಆರೋಪಿ ವಸಂತ್ ಕುಮಾರ್ ರವರಿಗೆ 133 ನೋಟೀಸು ಜಾರಿ ಮಾಡಿ ಅವರ ಕಡೆಯಿಂದ ಸೂಕ್ತ ಮಾಹಿತಿ ಪಡೆದುಕೊಂಡಿರುತ್ತೇನೆ. ನಂತರ ಸದರಿಯವರನ್ನು ದಸ್ತಗಿರಿ ನಿಯಮಾವಳಿ ಪಾಲಿಸಿ ಆರೋಪಿಯನ್ನು ದಸ್ತಗಿರಿ ಮಾಡಿ ನ್ಯಾಯಾಲಯಕ್ಕೆ ರವಾನಿಸಿರುತ್ತೇನೆ.

ದಿಃ 20-09-2022 ರಂದ ಚಾಸಾ-2 ರಿಂದ 4 ರಿವರ ಹೇಳಿಕೆಗಳನ್ನು ಪಡೆದುಕೊಂಡಿರುತ್ತೇನೆ. ದಿಃ 03-10-2022 ರಂದು ಚಾಸಾ-1 ರವರಿಗೆ ದ್ವಿಚಕ್ರ ವಾಹನವನ್ನು ಇನ್ ಡೆಮ್ ನಿಟಿ ಬಾಂಡ್ ಪಡೆದುಕೊಂಡು ವಾಹನ ಹಿಂತಿರುಗಿಸಿರುತ್ತೇನೆ. ಅದೇ ದಿನದಂದು ಆರೋಪಿಯ ವಿರುದ್ಧ ಅಂತಿಮ ವರದಿ ನ್ಯಾಯಾಲಯಕ್ಕೆ ಸಲ್ಲಿಸಿರುತ್ತೇನೆ.

ಸಾಕ್ಷಿಯು ನಿಪಿ-4 ರಿಂದ 6 ದಾಖಲಾತಿಗಳನ್ನು ಹಾಗೂ ಅದರಲ್ಲಿರುವ ಸಹಿಯನ್ನು ನೋಡಿ ಗುರುತಿಸಿದ್ದು ಸಹಿಯನ್ನು ನಿಪಿ-4(ಎ), 5(ಎ), 6(ಎ) ಎಂದು ಗುರುತಿಸಲಾಯಿತು. ಸಾಕ್ಷಿಯು ನಿಪಿ-2 ನ್ನು ಹಾಗೂ ಅದರಲ್ಲಿರುವ ಸಹಿಯನ್ನು ನೋಡಿ ಗುರುತಿಸಿದ್ದು ಸಹಿಯನ್ನು ನಿಪಿ-2(ಸಿ) ಎಂದು ಗುರುತಿಸಲಾಯಿತು. ಸಾಕ್ಷಿಯು ಕಚ್ಚಾ ನಕಾಶೆ ಹಾಗೂ ಅದರಲ್ಲಿರುವ ಸಹಿಯನ್ನು ನೋಡಿ ಗುರುತಿಸಿದ್ದು, ನಕಾಶೆಯನ್ನು ನಿಪಿ-7 ಎಂದು, ಸಹಿಯನ್ನು ನಿಪಿ-7(ಎ} ಎಂದು ಗುರುತಿಸಲಾಯಿತು. ದಿಃ 19-09-2022 ರಂದು ಪಡೆದುಕೊಂಡಿರುವ ಇನ್ಡೆಮ್ನಿಟಿ ಬಾಡನ್ನು ಹಾಗೂ ಅದರಲ್ಲಿರುವ ಸಹಿಯನ್ನು ನೋಡಿ ಗುರುತಿಸಿದ್ದು ಅದನ್ನು ನಿಪಿ-8 ಎಂದು, ಸಾಕ್ಷಿ ಸಹಿಯನ್ನು ನಿಪಿ-8(ಎ) ಎಂದು ಗುರುತಿಸಲಾಯಿತು. ಆರೋಪಿಯನ್ನು ನೋಡಿ ಗುರುತಿಸಿರುತ್ತೇನೆ.

**ಪಾಟೀ ಸವಾಲುಃ ಆರೋಪಿ ಪರ ಶ್ರೀ ಎಎಂಆರ್ ವಕೀಲರಿಂದ**

ಚಾಸಾ-1 ರವರು ಯಾವುದೇ ರೀತಿ ಲಿಖಿತ ದೂರನ್ನು ನನಗೆ ಕೊಟ್ಟಿರುವುದಿಲ್ಲ ಎಂದರೆ ಸರಿಯಲ್ಲ. ಸುಳ್ಳು ದೂರಿನ ಅನ್ವಯ ಅವರಿಗೆ ಅನುಕೂಲವಾಗುವಂತೆ ಸುಳ್ಳು ಪ್ರಕರಣವನ್ನು ದಾಖಲು ಮಾಡಿರುತ್ತೇನೆ ಎಂದರೆ ಸರಿಯಲ್ಲ. ನಾನು ಯಾವುದೇ ಕಾಲಕ್ಕೂ ಘಟನೆ ಸ್ಥಳಕ್ಕೆ ಭೇಟಿ

ನೀಡಿರುವುದಿಲ್ಲ ಎಂದರೆ ಸರಿಯಲ್ಲ, ಘಟನ ಸ್ಥಳದಲ್ಲಿ ಪಂಚರ ಸಮಕ್ಷಮ ಪಂಚನಾಮೆ ಜರುಗಿಸಿರುತ್ತೇನೆ ಅಂತ ಸುಳ್ಳು ಸಾಕ್ಷಿ ನುಡಿಯುತ್ತಿದ್ದೇನೆ ಎಂದರೆ ಸರಿಯಲ್ಲ, ಅದೇ ರೀತಿ ಪಂಚರ ಸಮಕ್ಷಮ ಶವ ಪಂಚನಾಮೆ ಜರುಗಿಸಿರುತ್ತೇನೆ ಅಂತ ಸುಳ್ಳು ಸಾಕ್ಷಿ ನುಡಿಯುತ್ತಿದ್ದೇನೆ ಎಂರದೆ ಸರಿಯಲ್ಲ. ಚಾಸಾ–1 ರವರಿಗೆ ಅನುಕೂಲವಾಗುವಂತೆ ಸುಳ್ಳು ಐಎಂವಿ ವರದಿಯನ್ನು ಯಾವುದೇ ರೀತಿ ಪರಿಶೀಲನೆಗೆ ಒಳಪಡಿಸಿದೇ ದಾಖಲಾತಿಯನ್ನು ನಾವೇ ಸೃಷ್ಟಿ ಮಾಡಿರುತ್ತೇವೆ ಎಂದರೆ ಸರಿಯಲ್ಲ. ಪ್ರಸ್ತುತ ಪ್ರಕರಣದಲ್ಲಿ ಯಾವ ಕಾಲಕ್ಕೂ ನಾನು ಸಾಕ್ಷಿದಾರರ ಹೇಳಿಕೆಗಳನ್ನು ಪಡೆದುಕೊಳ್ಳದೇ ಸುಳ್ಳು ಸಾಕ್ಷಿ ನುಡಿಯುತ್ತಿದ್ದೇನೆ ಎಂದರೆ ಸರಿಯಲ್ಲ. ನಾನು ಪಿಡಬ್ಯೂಡಿ ರವರಿಗೆ ಪತ್ರ ಬರೆದು ಅವರಿಂದ ನಕಾಶೆ ಪಡೆದುಕೊಂಡಿರುತ್ತೇನೆ ಅಂತ ಸುಳ್ಳು ಸಾಕ್ಷಿ ನುಡಿಯುತ್ತಿದ್ದೇನೆ ಎಂದರೆ ಸರಿಯಲ್ಲ, ಸದರಿ ಪ್ರಕರಣದಲ್ಲಿ ಬ್ಲಡ್ ಸ್ಯಾಂಪಲನ್ನು ಎಫ್ ಎಸ್ ಎಲ್–ಗೆ ಕಳುಹಿಸಿ ಅಲ್ಲಿಂದ ವರದಿಯನ್ನು ಪಡೆದುಕೊಂಡಿರುತ್ತೇನೆ ಅಂತ ಸುಳ್ಳು ನುಡಿಯುತ್ತಿದ್ದೇನೆ ಎಂದರೆ ಸರಿಯಲ್ಲ ಪ್ರಸ್ತುತ ಪ್ರಕರಣದಲ್ಲಿ ಎಫ್ ಎಸ್ ಎಲ್ ವರದಿಯನ್ನು ಪಡೆದುಕೊಂಡಿರುತ್ತೇನೆ ಅಂತ ಸುಳ್ಳು ಹೇಳುತ್ತಿದ್ದೇನೆ ಎಂದರೆ ಸರಿಯಲ್ಲ, ಎಲ್ಲಾ ತನಿಖೆಯನ್ನು ಹಾಗೂ ಎಲ್ಲಾ ದಾಖಲಾತಿಗಳನ್ನು ಠಾಣೆಯಲ್ಲಿ ಸೃಷ್ಟಿ ಮಾಡಿ ಮಾನ್ಯ ನ್ಯಾಯಾಲಯಕ್ಕೆ ಹಾಜರು ಮಾಡಿ ಈಗ ಸುಳ್ಳು ಸಾಕ್ಷಿ ನುಡಿಯುತ್ತಿದ್ದೇನೆ ಎಂದರೆ ಸರಿಯಲ್ಲ. ನನ್ನ ತನಿಖಾ ಅವಧಿಯಲ್ಲಿ ಆರೋಪಿ ಯಾವುದೇ ತಪ್ಪು ಮಾಡದೇ ಇದ್ದರೂ ಕೂಡ ಆರೋಪಿ ವಿರುದ್ಧ ಸುಳ್ಳು ಅಂತಿಮ ವರದಿ ಸಲ್ಲಿಸಿ ಸುಳ್ಳು ಸಾಕ್ಷಿ ನುಡಿಯುತ್ತಿದ್ದೇನೆ ಎಂದರೆ ಸರಿಯಲ್ಲ.

**ಮರು ವಿಚಾರಣೆಃ ಇರುವುದಿಲ್ಲ.**

(ತೆರೆದ ನ್ಯಾಯಾಲಯದಲ್ಲಿ ಸಾಕ್ಷಿಯ ಹೇಳಿಕೆ ಮೇರೆಗೆ ನನ್ನ ಉಕ್ತಲೇಖನದಂತೆ ಬೆರಳಚ್ಚು ಮಾಡಲಾಯಿತು)

ಓ ಹೇ ಕೇ ಸರಿ ಇದೆ.

**(ಸುಕೀತಾ ಎಸ್ ಹದ್ಲಿ)**
ಪ್ರಧಾನ ಸಿವಿಲ್ ನ್ಯಾಯಾಧೀಶರು
ಮತ್ತು ಜೆ.ಎಂ.ಎಫ್.ಸಿ, ಬಂಗಾರಪೇಟೆ